O.S.No.:316/2018
P.W.:2

ಈ ದಿನ ದಿಃ05.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಎಸ್.ಪಿ.ಕೆ ರವರಿಂದಃ-**

ಈ ಪ್ರಕರಣದಲ್ಲಿ ಪಿ.ಡಬ್ಲ್ಯೂ -1 ರವರು ತಮ್ಮ ಮುಖ್ಯವಿಚಾರಣೆಯ ಸಾಕ್ಷ್ಯದ ಸಮಯದಲ್ಲಿ ಹಾಜರುಪಡಿಸಿದ ದಾಖಲೆಗಳನ್ನೇ ನನ್ನ ಮುಖ್ಯವಿಚಾರಣೆಯಲ್ಲಿಯು ನಿಶಾನೆಗಳನ್ನಾಗಿ ಗುರುತಿಸಬೇಕೆಂದು ಕೇಳಿಕೊಳ್ಳುತ್ತೇನೆ.

ದಿಃ27.07.2018 ರಂದು ಉಪತಹಶೀಲ್ದಾರ್ ಮರಳವಾಡಿ ಹೋಬಳಿ, ಕನಕಪುರ ತಾಲ್ಲೂಕು ರವರು ನೀಡಿದ ನಮ್ಮ ಕುಟುಂಬದ ವಂಶವೃಕ್ಷವನ್ನು ನನ್ನ ತಂದೆಯವರು ಚಾಪಾ ಕಾಗದದ ಮೇಲೆ ದೃಢೀಕರಿಸಿ ಪ್ರಮಾಣೀಕರಿಸಿರುವ ಪ್ರಮಾಣ ಪತ್ರದ ಸಮೇತ ಹಾಜರುಪಡಿಸಿದ್ದೇನೆ. ಅವೆರಡನ್ನು ಒಟ್ಟಾರೆ ನಿಪಿ-1 ಎಂದು ಗುರುತಿಸಲಾಯಿತು.

ಮ್ಯೂಟೇಶನ್ ಎಕ್ಸ್ ಟ್ರಾಕ್ಟ್ ನ ದೃಢೀಕೃತ ಪ್ರತಿಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ನಾಲ್ಕು ಕೈಬರಹದ ಪಹಣಿ ಪತ್ರಿಕೆಗಳ ದೃಢೀಕೃತ ಪ್ರತಿಗಳನ್ನು ಹಾಜರು ಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿಪಿ-3 ರಿಂದ ನಿಪಿ-6 ಎಂದು ಗುರುತಿಸಲಾಯಿತು.

ಸರ್ವೆ ನಂ.216/2 ಜಮೀನಿಗೆ ಸಂಬಂಧಿಸಿದಂತೆ 2006-2007ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ಸರ್ವೆ ನಂ.216/2 ಜಮೀನಿಗೆ ಸಂಬಂಧಿಸಿದಂತೆ 2011-2012ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ಸರ್ವೆ ನಂ.216/2 ಜಮೀನಿಗೆ ಸಂಬಂಧಿಸಿದಂತೆ 2015-2016ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-9 ಎಂದು ಗುರುತಿಸಲಾಯಿತು.

ಒಂದು ಅಂಚೆ ಸ್ವೀಕೃತಿ ಪತ್ರವನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-10 ಎಂದು ಗುರುತಿಸಲಾಯಿತು.

ವಾದಿ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಕಾಲಾವಕಾಶ ಕೇಳಿದ್ದು, ಆಲಿಸಿ ಕಾಲಾವಕಾಶ ನೀಡಲಾಯಿತು.

O.S.No.:316/2018
P.W.:2

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**